

ಸಂಪಾದಕರು :
ಭರತ್‌ಕುಮಾರ್ ಕೆ.ಎಸ್.

ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಪ್ರಕಟ

ಗಡಿನಾಡ ಸುದ್ದಿ



ಸತ್ಯ ಸಂಗತಿಯ ಕನ್ನಡ ದಿನಪತ್ರಿಕೆ

Email:gadinadasuddi@gmail.com

ಸಹಸಂಪಾದಕ: ಭಾಗ್ಯನಗರ ಶ್ರೀನಿವಾಸ್

GADINADA SUDDI - Kannada Daily

ಸಂಪುಟ : 01 ಸಂಚಿಕೆ : 39 ಗುರುವಾರ , 05-11-2026 ಪುಟ : 4 ಬೆಲೆ : 2-00 ರೂ. ಮೊ: 9448535516, 9663084239 PRGI No. KNKAN/2024/89684

ಜಾಹಿರಾತು ನೀಡಲು ಸಂಪರ್ಕಿಸಿ: 9448535516, 9663084239

ನವೆಂಬರ್ 13ಕ್ಕೆ ಬೆಂಗಳೂರಿಗೆ ಪ್ರಧಾನಿ ಮೋದಿ: ನಮ್ಮ ಮೆಟ್ರೋ ಪಿಂಕ್ ಲೈನ್ ಎಲಿವೇಟೆಡ್ ಮಾರ್ಗ ಉದ್ಘಾಟನೆ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ನವೆಂಬರ್ 13ರಂದು ಬೆಂಗಳೂರಿನಲ್ಲಿ ನಮ್ಮ ಮೆಟ್ರೋದ ಪಿಂಕ್ ಲೈನ್ ಹಾಗೂ ಮೈಸೂರಿನಲ್ಲಿ ವಿಶ್ವದ ಮೊದಲ ಓರೆಯಾದ ಎಲ್‌ಇಡಿ ಡೋಮ್ ತಾರಾಲಯವನ್ನು ಉದ್ಘಾಟಿಸಲಿದ್ದಾರೆ. ಪ್ರಧಾನಿ ಮೋದಿ ಅವರು ತಾವರೆಕೆರೆ ನಿಲ್ದಾಣದಿಂದ ಐಐಎಂಬಿ-ಬಿಳೇಕಹಳ್ಳಿ ನಿಲ್ದಾಣದವರೆಗೆ ಮೆಟ್ರೋದಲ್ಲಿ ಪ್ರಯಾಣಿಸಿ, ಪಿಂಕ್ ಲೈನ್ ಸಂಚಾರಕ್ಕೆ ಚಾಲನೆ ನೀಡಲಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ, ಪ್ರಧಾನಿ ಮೋದಿ ಅವರು ತಾವರೆಕೆರೆ ನಿಲ್ದಾಣದಿಂದ ಐಐಎಂಬಿ-ಬಿಳೇಕಹಳ್ಳಿ ನಿಲ್ದಾಣದವರೆಗೆ ಮೆಟ್ರೋದಲ್ಲಿ ಪ್ರಯಾಣಿಸಿ, ಪಿಂಕ್ ಲೈನ್ ಸಂಚಾರಕ್ಕೆ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ 7.5 ಕಿ.ಮೀ. ಉದ್ದದ ಎಲಿವೇಟೆಡ್ ಮಾರ್ಗ ಸೇರ್ಪಡೆಯೊಂದಿಗೆ, ಬೆಂಗಳೂರಿನ ಮೆಟ್ರೋ ಜಾಲವು ಈಗಿನ 96.1 ಕಿ.ಮೀ.ನಿಂದ 103.6 ಕಿ.ಮೀ.ಗೆ ವಿಸ್ತರಣೆಯಾಗಲಿದೆ. ಈ ಮೂಲಕ ಬೆಂಗಳೂರಿನ ಕಾರ್ಯಾಚರಣೆಯಲ್ಲಿರುವ ಮೆಟ್ರೋ ಜಾಲವು 100 ಕಿ.ಮೀ. ಗಡಿ ದಾಟಲಿದ್ದು, ದೆಹಲಿ ಬಳಿಕ ದೇಶದ ಎರಡನೇ ಅತಿದೊಡ್ಡ ಮೆಟ್ರೋ ಜಾಲ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ ಎಂದು ಸೂರ್ಯ ಹೇಳಿದರು.ನಾಲ್ಕು ತಿಂಗಳ ಅವಧಿಯಲ್ಲಿ ಮೋದಿ ಅವರು ಎರಡನೇ ಬಾರಿಗೆ



ಮೈಸೂರಿಗೆ ಭೇಟಿ ನೀಡಲಿದ್ದಾರೆ. ಇದಕ್ಕೂ ಮೊದಲು ಆಗಸ್ಟ್ 1ರಂದು ಶ್ರೀ ರಾಮಕೃಷ್ಣ ಆಶ್ರಮದಲ್ಲಿ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಯುವ ಕೇಂದ್ರವಾದ ವಿವೇಕ ಸ್ಮಾರಕವನ್ನು ಉದ್ಘಾಟಿಸಲು ಮೈಸೂರಿಗೆ ಭೇಟಿ ನೀಡಿದ್ದರು. ಅಕ್ಟೋಬರ್ 24ರಂದು ನಿಗದಿಯಾಗಿದ್ದ ಅವರ ಮೈಸೂರು ಭೇಟಿ ಮುಂದೂಡಿಕೆಯಾಗಿತ್ತು.

ವೀರಯೋಧ ಎ.ಪಿ. ಪ್ರಶಾಂತ್ ಪಾರ್ಕ್ ಸಮೀಪದ ಕೆಂಪು ಚೆಲುವಜಮ್ಮಣ್ಣಿ ನಗರದಲ್ಲಿ ಸ್ವಚ್ಛ ಭಾರತ್ ಮಿಷನ್‌ನ ಲಾಂಛನದ ಆಕಾರದಲ್ಲಿ ಅಭಿವೃದ್ಧಿಪಡಿಸಲಾಗುತ್ತಿರುವ ಮಿಯಾವಾಕಿ ಕಿರು ಅರಣ್ಯವನ್ನೂ ಮೋದಿ ಉದ್ಘಾಟಿಸುವ ನಿರೀಕ್ಷೆಯಿದೆ.

10 ವರ್ಷದಲ್ಲಿ ಬೆಂಗಳೂರು ಅಭಿವೃದ್ಧಿಗೆ 50 ಸಾವಿರ ಕೋಟಿ ಖರ್ಚು; ಆದರೂ ರಸ್ತೆ, ಚರಂಡಿ, ಸಂಚಾರ ಸಮಸ್ಯೆಗಿಲ್ಲ ಮುಕ್ತಿ..!

ಹಳದಿ ಮಾರ್ಗದಲ್ಲಿ ತಾಂತ್ರಿಕ ದೋಷ

ನಮ್ಮ ಮೆಟ್ರೋದ ಹಳದಿ ಮಾರ್ಗದ ಎಲ್ಲ ನಿಲ್ದಾಣಗಳಲ್ಲಿನ ಸ್ವಯಂಚಾಲಿತ ರೈಲು ಪ್ರಕಟಣೆ ವ್ಯವಸ್ಥೆ ಹಾಗೂ ನೈಜ ಸಮಯದ ರೈಲು ಮಾಹಿತಿ ಪ್ರದರ್ಶನ ಫಲಕಗಳಲ್ಲಿ ಮಂಗಳವಾರ ಸುಮಾರು ಒಂದು ಗಂಟೆ ಕಾಲ ತಾಂತ್ರಿಕ ದೋಷ ಕಾಣಿಸಿಕೊಂಡಿತ್ತು.

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಃಒಖಅಐ) ಪ್ರಕಾರ, ನಿನ್ನೆ ಸಂಜೆ 4.55ರಿಂದ 5.50ರವರೆಗೆ ಈ ವ್ಯವಸ್ಥೆಗಳು ಕಾರ್ಯನಿರ್ವಹಿಸಲಿಲ್ಲ. ಆದರೆ, ರೈಲು ಸಂಚಾರಕ್ಕೆ ಯಾವುದೇ ಅಡಚಣೆಯಾಗಿರಲಿಲ್ಲ.

ಬಿಎಂಆರ್‌ಸಿಎಲ್ ಮತ್ತು ಇತರ ಸಂಸ್ಥೆಗಳು ಯೋಜನೆಯಲ್ಲಿನ ಅಡೆತಡೆಗಳನ್ನು ನಿವಾರಿಸಿ ಕಾಮಗಾರಿಗೆ ವೇಗ ನೀಡಲು ಕೈಗೊಂಡ ಕ್ರಮಗಳಿಂದ ಯೋಜನೆ ನಿಗದಿತ ಹಾದಿಯಲ್ಲಿ ಸಾಗಲು ಸಾಧ್ಯವಾಗಿದೆ ಎಂದು ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಮೆಟ್ರೋ ಜಾಲವನ್ನು 2027ರ ವೇಳೆಗೆ 170 ಕಿ.ಮೀ.ಗೆ ವಿಸ್ತರಿಸುವ ಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಮುಂದಿನ ಹಂತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಿದೆ ಎಂದು ತಿಳಿಸಿದರು.

ನಮ್ಮ ಮೆಟ್ರೋ ಉದ್ಘಾಟನೆಯ ಬಳಿಕ ಪ್ರಧಾನಿ ಮೋದಿ ಅವರು ಮೈಸೂರಿಗೆ ತೆರಳಲಿದ್ದು, ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯದ ಶ್ರೀ ಜಯಚಾಮರಾಜ ಒಡೆಯರ್ ಉನ್ನತ ಅಧ್ಯಯನ ಕೇಂದ್ರದಲ್ಲಿ ವಿಶ್ವದ ಮೊದಲ ಓರೆಯಾದ ಎಲ್‌ಇಡಿ ಡೋಮ್ ತಾರಾಲಯವನ್ನು ಉದ್ಘಾಟಿಸಲಿದ್ದಾರೆ.

ವಕೀಲರ ಸಂರಕ್ಷಣಾ ಕಾಯ್ದೆ ಜಾರಿಗೆ ಒತ್ತಾಯಿಸಿ ಭಾಗ್ಯನಗರ ವಕೀಲರ ಸಂಘದಿಂದ ಪ್ರತಿಭಟನೆ




ಬಾಗೇಪಲ್ಲಿ(ಭಾಗ್ಯನಗರ):- ರಾಜ್ಯದಲ್ಲಿ ವಕೀಲರ ಮೇಲೆ ನಡೆಯುತ್ತಿರುವ ಹಲ್ಲೆ ಹಾಗೂ ದೌರ್ಜನ್ಯ ಘಟನೆಗಳನ್ನು ಖಂಡಿಸಿ, ವಕೀಲರ ಸಂರಕ್ಷಣಾ ಕಾಯ್ದೆಯನ್ನು ಜಾರಿಗೆ ತರಬೇಕೆಂದು ಆಗ್ರಹಿಸಿ ರಾಜ್ಯ ವಕೀಲರ ಪರಿಷತ್ ವತಿಯಿಂದ ರಾಜ್ಯಾದ್ಯಂತ ನಡೆಯುತ್ತಿರುವ ಪ್ರತಿಭಟನೆಯ ಬಾಗವಾಗಿ ಬಾಗೇಪಲ್ಲಿ ವಕೀಲರ ಸಂಘ ಸಂಪೂರ್ಣ ಬೆಂಬಲ ಸೂಚಿಸಿದೆ ಎಂದು ಸಂಘದ ಅಧ್ಯಕ್ಷ ಜೆ.ಎನ್.ಮಂಜುನಾಥ್ ತಿಳಿಸಿದರು.ಪಟ್ಟಣದ ಜೆಎಂಎಫ್‌ಸಿ ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿದ ವಕೀಲರು, ನ್ಯಾಯಾಲಯದ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ತಾಲ್ಲೂಕು ಆಡಳಿತ ಕಚೇರಿಗೆ ತೆರಳಿ ಗ್ರೇಡ್-2 ತಹಸೀಲ್ದಾರ್ ಮೋಹನ್ ಬಾಬು ಅವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಮನವಿಯನ್ನು ತಮ್ಮ ಮೂಲಕ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಕಾನೂನು ಸಚಿವರಿಗೆ ಸಲ್ಲಿಸಲಾಗುತ್ತಿದೆ ಎಂದು ವಕೀಲರ ಸಂಘದ ಅಧ್ಯಕ್ಷರು ತಿಳಿಸಿದರು.

ಈ ವಕೀಲರ ಸಂಘದ ಉಪಾಧ್ಯಕ್ಷ ರವಿ, ಕಾರ್ಯದರ್ಶಿ ಜಯಪ್ಪ, ಮಾಜಿ ಅಧ್ಯಕ್ಷ ಎ.ನಂಜುಂಡಪ್ಪ, ಮುಸ್ತಾಕ್ ಅಹ್ಮದ್, ಹಿರಿಯ ವಕೀಲರಾದ ಕರುಣಾಸಾಗರರೆಡ್ಡಿ, ಅಲ್ಲಾಬಕಾಶ್, ವಕೀಲರಾದ ಪ್ರಸನ್ನ, ಸತೀಶ್, ಬಾಬು, ಬಾಲುನಾಯ್ಕ ಸೇರಿದಂತೆ ಮತ್ತಿತರರು ಇದ್ದರು.

ಭಾಗ್ಯನಗರದ ಸಾಧಕರಿಗೆ ಜಿಲ್ಲಾಡಳಿತದಿಂದ ರಾಜ್ಯೋತ್ಸವ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು











ಬಾಗೇಪಲ್ಲಿ(ಭಾಗ್ಯನಗರ):- ಜಿಲ್ಲಾ ಕನ್ನಡ ರಾಜ್ಯೋತ್ಸವದ ಪ್ರಶಸ್ತಿ ಸ್ವೀಕರಿಸಿದ ತಾಲ್ಲೂಕಿನ ಪತ್ರಕರ್ತರ ಸಂಘದ ಅಧ್ಯಕ್ಷರಾದ ಡಿ.ಎನ್. ಕೃಷ್ಣಾರೆಡ್ಡಿ ಅವರಿಗೆ ಜಾನಪದ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಇವರು ಈ ಹಿಂದೆ ಬಾಗೇಪಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು, ಕನ್ನಡ ಸಾಹಿತ್ಯ, ಭಾಷೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಸಾಹಿತ್ಯ ಮತ್ತು ಪತ್ರಿಕೋದ್ಯಮ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿರುವ ಇವರು ಕನ್ನಡಪರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವುದು ವಿಶೇಷವಾಗಿದೆ. ಮತ್ತೊಬ್ಬ ಹೊಸ ದಿಗಂತ ದಿನಪತ್ರಿಕೆಯ ವರದಿಗಾರರಾದ ವಿ.ಅಶ್ವತ್ಥನಾರಾಯಣ(ಮಣಿಕಂಠ) ಅವರಿಗೆ ಕನ್ನಡಪರ ಸೇವೆಗಾಗಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಪತ್ರಿಕೋದ್ಯಮದ ಜವಾಬ್ದಾರಿಯ ಜೊತೆಗೆ ಕನ್ನಡ ಭಾಷೆ ಮತ್ತು ಕನ್ನಡಪರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಇವರು ಬಾಗೇಪಲ್ಲಿ ಪಟ್ಟಣದ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ಸ್ಟೇಷನರಿ ಮತ್ತು ಜೆರಾಕ್ಸ್ ಅಂಗಡಿ ಸುಧಾ ಸ್ಟೋರ್ಸ್ ಮಾಲೀಕರಾಗಿಯೂ ಗುರುತಿಸಿಕೊಂಡಿದ್ದಾರೆ. ವೃತ್ತಿ ಬದುಕಿನ ಜೊತೆಗೆ ಕನ್ನಡದ ಬಗ್ಗೆ ಅಭಿಮಾನ ಹೊಂದಿ ಕನ್ನಡಪರ ಸೇವೆಯಲ್ಲಿ ತೊಡಗಿಸಿಕೊಂಡಿರುವುದು ಗಮನಾರ್ಹವಾಗಿದೆ.

ನೂತನ ತಾಲೂಕು ಚೇಳೂರು ಹಿರಿಯ ಪತ್ರಕರ್ತ ಜೆ.ಕೆ.ಆನಂದ್ ಅವರು ಮಾಧ್ಯಮ ಕ್ಷೇತ್ರದಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು ಅವರಿಗು ಸಹ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಪ್ರಸ್ತುತ ಚೇಳೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಎಂ.ಸಿ.ಅಶ್ವತಪ್ಪ ರವರು ಬಾಗೇಪಲ್ಲಿ ತಾಲ್ಲೂಕಿನಲ್ಲಿ ಜಾನಪದ ಕ್ಷೇತ್ರದಲ್ಲಿ ಅತ್ಯಂತ ಸಕ್ರಿಯವಾಗಿ ಗುರುತಿಸಿಕೊಂಡಿರುವ ಸಾಧಕರಲ್ಲೊಬ್ಬರಾಗಿದ್ದಾರೆ. ಗ್ರಾಮೀಣ ಭಾಗದ ಜಾನಪದ ಕಲೆ, ಸಂಪ್ರದಾಯ, ಆಚರಣೆಗಳು ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಕಾರಣ ಇವರ ಸೇವೆಯನ್ನು ಗುರ್ತಿಸಿ ಜಾನಪದ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಜಾನಪದವು ಗ್ರಾಮೀಣ ಜನಜೀವನದ ಪ್ರತಿಬಿಂಬವಾಗಿದ್ದು, ಅದರ ಉಳಿವಿಗಾಗಿ ಶ್ರಮಿಸುವವರನ್ನು ಗುರ್ತಿಸಿರುವುದು ಪ್ರಶಂಸನೀಯವಾಗಿದೆ.

ಇದೇ ರೀತಿ ಗಡಿದಂ ಗ್ರಾಮದ ಅಶ್ವತ್ಥನಾರಾಯಣಸ್ವಾಮಿ ಅವರಿಗೆ ಸಮಾಜ ಸೇವಾ ಕ್ಷೇತ್ರದಲ್ಲಿ ತಾವು ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಪ್ರಶಸ್ತಿ ಪ್ರದಾನ ಮಾಡಲಾಗಿದೆ. ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಾರ್ವಜನಿಕರ ಹಿತಾಸಕ್ತಿಗಾಗಿ ಶ್ರಮಿಸುತ್ತಿರುವ ಇವರ ಸೇವೆಗೆ ಜಿಲ್ಲಾ ಮಟ್ಟದ ಮನ್ನಣೆ ದೊರೆತಿರುವುದು ಗಡಿದಂ ಗ್ರಾಮ ಸೇರಿದಂತೆ ಬಾಗೇಪಲ್ಲಿ ತಾಲ್ಲೂಕಿನ ಜನರಿಗೆ ಸಂತಸ ತಂದಿದೆ.

ಪತ್ರಿಕೋದ್ಯಮ, ಸಾಹಿತ್ಯ, ಜಾನಪದ, ಕನ್ನಡಪರ ಚಟುವಟಿಕೆ ಹಾಗೂ ಸಮಾಜ ಸೇವೆಯಂತಹ ವಿಭಿನ್ನ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಈ ನಾಲ್ವರು ವ್ಯಕ್ತಿಗಳು ರಾಜ್ಯೋತ್ಸವದ ಒಂದೇ ವೇದಿಕೆಯಲ್ಲಿ ಗೌರವಕ್ಕೆ ಪಾತ್ರರಾಗಿರುವುದು ಈ ಬಾರಿಯ ಕನ್ನಡ ರಾಜ್ಯೋತ್ಸವದ ವಿಶೇಷತೆಯಾಗಿದೆ. ವಿಶೇಷವೆಂದರೆ ಗ್ರಾಮೀಣ ಪ್ರದೇಶಗಳಲ್ಲಿ ನೆಲೆಸಿದ್ದುಕೊಂಡು ತಮ್ಮ ವೃತ್ತಿ ಮತ್ತು ಸಾಮಾಜಿಕ ಜವಾಬ್ದಾರಿಗಳ ಮೂಲಕ ಸಮಾಜಕ್ಕೆ ಕೊಡುಗೆ ನೀಡುತ್ತಿರುವವರನ್ನು ಗುರ್ತಿಸಿ ಪ್ರಶಸ್ತಿ ನೀಡಿರುವುದು ಇತರರಿಗೂ ಪ್ರೇರಣೆಯಾಗಲಿದೆ.

ಕನ್ನಡ ಭಾಷೆಯ ಉಳಿವು ಕೇವಲ ರಾಜ್ಯೋತ್ಸವ ಆಚರಣೆಗೆ ಸೀಮಿತವಾಗದೆ ಕನ್ನಡ ಸಾಹಿತ್ಯದ ಬೆಳವಣಿಗೆ, ಜಾನಪದ ಕಲೆಯ ಸಂರಕ್ಷಣೆ, ಕನ್ನಡಪರ ಚಟುವಟಿಕೆಗಳಿಗೆ ಪ್ರೋತ್ಸಾಹ ಹಾಗೂ ಸಮಾಜಮುಖಿ ಸೇವೆಗಳ ಮೂಲಕ ಸಾಕಾರಗೊಳ್ಳಬೇಕು. ಈ ನಿಟ್ಟಿನಲ್ಲಿ ಬಾಗೇಪಲ್ಲಿ ತಾಲ್ಲೂಕಿನ ಸಾಧಕರಿಗೆ ದೊರೆತಿರುವ ಜಿಲ್ಲಾ ಮಟ್ಟದ ಗೌರವವು ತಾಲ್ಲೂಕಿನ ಸಾಂಸ್ಕೃತಿಕ ಮತ್ತು ಸಾಮಾಜಿಕ ಹೆಮ್ಮೆಯನ್ನು ಹೆಚ್ಚಿಸಿದೆ. ಪ್ರಶಸ್ತಿ ಪುರಸ್ಕೃತರಿಗೆ ಬಾಗೇಪಲ್ಲಿ ತಾಲ್ಲೂಕಿನ ಪತ್ರಕರ್ತರು, ಕನ್ನಡಪರ ಸಂಘಟನೆಗಳ ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದಾರೆ.

ಸರ್ಕಾರಿ ಯೋಜನೆಗಳ ಫಲಾನುಭವಿಗಳಿಗೆ ಆಧಾರ್ ಬದಲು ಬಯೋಮೆಟ್ರಿಕ್ ಮತ್ತು ವೋಟರ್ ಐಡಿ ಕಡ್ಡಾಯ

ನವದೆಹಲಿ,ನ.4-ಇದುವರೆಗೆ ಆಧಾರ್ ಸಂಖ್ಯೆಯ ಆಧಾರದಲ್ಲಿ ಪಾವತಿಗಳನ್ನು ಪಡೆಯುತ್ತಿದ್ದ ವಿವಿಧ ಯೋಜನೆಗಳ ಫಲಾನುಭವಿಗಳು ಇನ್ನು ಮುಂದೆ ತಮ್ಮ ಬಯೋಮೆಟ್ರಿಕ್ಸ್ (ಜೈವಿಕ ಗುರುತುಗಳು) ಮತ್ತು ಮತದಾರರ ಗುರುತಿನ ಚೀಟಿ (ವೋಟರ್ ಐಡಿ) ಸಂಖ್ಯೆಗಳನ್ನು ಬಳಸಬೇಕಾಗುತ್ತದೆ ಎಂದು ಕೇಂದ್ರ ಸಚಿವ ರಾಜೀವ್ ರಂಜನ್ ಸಿಂಗ್ (ಲಾಲನ್ ಸಿಂಗ್) ತಿಳಿಸಿದ್ದಾರೆ.

ಪೀಪಲ್ ಪ್ಲಾನ್ ಕ್ಯಾಂಪೇನ್ 2026-27 (ಜನರ ಯೋಜನೆ ಅಭಿಯಾನ 2026-27) ಕುರಿತ ರಾಷ್ಟ್ರೀಯ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ದಾಖಲಾತಿ ಕೇಂದ್ರಗಳ



ವ್ಯಾಪಕ ಲಭ್ಯತೆ ಮತ್ತು ಆಧಾರ್ ಕಾರ್ಡ್ ಅನ್ನು ಪಡೆಯುವ ಸುಲಭವು ಫಲಾನುಭವಿಗಳನ್ನು ಪರಿಶೀಲಿಸಲು ಅಸಮರ್ಪಕ ಸಾಧನವಾಗಿದೆ ಎಂದು ತಿಳಿಸಿದರು. ಫಲಾನುಭವಿಗಳಿಗೆ ಪಾವತಿ ಮಾಡಲು ಆಧಾರ್ ಕಾರ್ಡ್ ಇನ್ನು ಮುಂದೆ ಆಧಾರವಾಗಿರುವುದಿಲ್ಲ, ಆಧಾರ್-ನೋಂದಣಿ ಕೇಂದ್ರಗಳು ಈಗ ಎಲ್ಲೆಡೆ ಇವೆ. ನೀವು ಪ್ರತಿ ಬೀದಿಯಲ್ಲಿಯೂ ಒಂದನ್ನು ಕಾಣಬಹುದು ಎಂದರು.

ಫಲಾನುಭವಿಗಳ ಪರಿಶೀಲನೆ ಮತ್ತು ಪಾವತಿ ಪ್ರಕ್ರಿಯೆಯಲ್ಲಿ ಬದಲಾವಣೆಯಾಗಲಿದೆ ಎಂದ ಅವರು, ಫಲಾನುಭವಿಗಳನ್ನು ಗುರುತಿಸಲು ಆಧಾರ್‌ಗೆ ಬದಲಾಗಿ, ಇನ್ನು ಮುಂದೆ ಬಯೋಮೆಟ್ರಿಕ್ ದೃಢೀಕರಣ ಮತ್ತು ಮತದಾರರ ಗುರುತಿನ ಚೀಟಿಯಲ್ಲಿರುವ (ಎಪಿಕ್ ಸಂಖ್ಯೆ) ಇಪಿಐಸಿ ಸಂಖ್ಯೆಯನ್ನು ಬಳಸಲಾಗುವುದು ಎಂದು ತಿಳಿಸಿದರು.

ಅಕ್ರಮ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿರುವ ಈ ಎಪಿಎಂಸಿ ಮಾರುಕಟ್ಟೆಗೆ, ಇಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿ ವರ್ಗದವರ ಬೇಜವಾಬ್ದಾರಿತನವೇ ಮುಖ್ಯ ಕಾರಣ-ನಂಜುಂಡಪ್ಪ ಆರೋಪ,



ಬಾಗೇಪಲ್ಲಿ (ಭಾಗ್ಯನಗರ):- ಪಟ್ಟಣದ ಎ.ಪಿ.ಎಂ.ಸಿ ಮಾರುಕಟ್ಟೆ ಸಂಜೆಯಾಗುತ್ತಿದ್ದಂತೆ ಅನೈತಿಕ ಚಟುವಟಿಕೆಗಳ ತಾಣವಾಗಿ ಮಾರ್ಪಡುತ್ತಿದೆ. ಸಂಜೆ ಸಮಯದಲ್ಲಿ ಅಕ್ರಮವಾಗಿ ಮಾರುಕಟ್ಟೆಗೆ ಪ್ರವೇಶಿಸಿ, ಅನೈತಿಕ ಚಟುವಟಿಕೆಗಳನ್ನು ನಡೆಸುತ್ತಿರುವುದು ಕಂಡುಬರುತ್ತಿದೆ ಎಂದು ಮಾರ್ಕೆಟ್ ನಂಜುಂಡಪ್ಪ ತಿಳಿಸಿದ್ದಾರೆ.

ಎಂದಿನಂತೆ ರೈತರು, ವರ್ತಕರು ಮತ್ತು ದಲ್ಲಾಳಿಗಳು ಮುಂಜಾನೆಯಿಂದ ತಮ್ಮ ವ್ಯಾಪಾರ ವಹಿವಾಟುಗಳನ್ನು ನಡೆಸಿ, ಉಳಿದ ಸರಕನ್ನು ತಮ್ಮ ವ್ಯವಹಾರದ ಸ್ಥಳದಲ್ಲಿಯೇ ಬಿಟ್ಟು ಸಂಜೆ ವೇಳೆ ಮನೆಗಳಿಗೆ ತೆರಳುತ್ತಾರೆ. ಅದೇ ಸಮಯಕ್ಕಾಗಿ ಕಾಯುತ್ತಿದ್ದು, ಯಾರೂ ಇಲ್ಲದ ಸಂದರ್ಭದಲ್ಲಿ ಹಲವು ಪುಂಡರು ಮತ್ತು ಅಪರಿಚಿತ ವ್ಯಕ್ತಿಗಳು ಮಾರುಕಟ್ಟೆ ಪ್ರಾಂಗಣಕ್ಕೆ ಅಕ್ರಮವಾಗಿ ಪ್ರವೇಶಿಸಿ, ಮದ್ಯಪಾನ ಮಾಡುವುದು, ಗಾಂಜ ಸೇವನೆ ಮಾಡುವುದು, ರೈತರ ತರಕಾರಿಗಳನ್ನು ಕದಿವುದು ಸೇರಿದಂತೆ ಹಲವಾರು ರೀತಿಯ ಅಕ್ರಮ ಚಟುವಟಿಕೆಗಳನ್ನು ನಡೆಸುತ್ತಿರುವುದು ಸರ್ವೇಸಾಮಾನ್ಯವಾಗಿದೆ. ಇಲ್ಲಿ ಹೇಳುವವರು, ಕೇಳುವವರು ಯಾರು ಗತಿ ಇಲ್ಲದಂತಹ ಸ್ಥಿತಿ ನಿರ್ಮಾಣವಾಗಿದೆ ಎಂದರು.ಈ ಮಾರುಕಟ್ಟೆಗೆ ಸೂಕ್ತ ಕಾಂಪೌಂಡ್ ಹಾಗೂ ಕಾವಲುಗಾರರ ವ್ಯವಸ್ಥೆ ಇಲ್ಲದೇ ಇರುವ ಕಾರಣ, ಅಕ್ರಮ ಚಟುವಟಿಗಳ ಬಗ್ಗೆ ಮಾರುಕಟ್ಟೆ ಮಂಡಿ ವ್ಯಾಪಾರಸ್ಥ ನಂಜುಂಡಪ್ಪ ನಮ್ಮ ಪತ್ರಿಕೆಗೆ ವಿವರಿಸುತ್ತಾ, ನಾವುಗಳೆಲ್ಲರೂ ನಮ್ಮ ಎಂದಿನಂತೆ ಅಂಗಡಿಯವರಾದ ನಾವು ದಿನನಿತ್ಯ ವ್ಯವಹಾರಗಳನ್ನು ಮುಗಿಸಿ ಮನೆಗಳಿಗೆ ತೆರಳಿದ ನಂತರ ಸಂಜೆ ಮತ್ತು ರಾತ್ರಿಯ ಸಮಯವನ್ನು ಬಳಸಿಕೊಂಡು ಕೆಲ ಅಪರಿಚಿತ ವ್ಯಕ್ತಿಗಳು ಮಾರುಕಟ್ಟೆಗೆ ಅಕ್ರಮವಾಗಿ ಪ್ರವೇಶಿಸುತ್ತಾರೆ. ಹೀಗೆ ಪ್ರವೇಶಿಸುವ ಹಲವು ವ್ಯಕ್ತಿಗಳು ಮಾರುಕಟ್ಟೆಯಲ್ಲಿ ರೈತರು ಆ ದಿನ ಮಾರಾಟವಾಗದೇ ಅಥವಾ ಸೂಕ್ತ ಬೆಲೆ ಸಿಗದೇ ಇನ್ನೂ ಹಲವು ಕಾರಣಗಳಿಂದ ಮುಂದಿನ ದಿನದಲ್ಲಿ ಮಾರಾಟ ಮಾಡುವ ಉದ್ದೇಶದಿಂದ ನಮ್ಮ ಮಂಡಿಗಳ ಮುಂದೆಯೇ ಬಿಟ್ಟು ಹೋಗಿರುವಂತಹ ತರಕಾರಿಗಳನ್ನು ಕಳ್ಳತನವಾಗಿ ಹೊತ್ತೊಯ್ಯುತ್ತಿದ್ದಾರೆ. ನಮ್ಮ ಮಾರುಕಟ್ಟೆಯ



ಪಕ್ಕದ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲೇ ಒಂದು ಬಾರ್ ಇದೆ. ಈ ಬಾರ್‌ನಲ್ಲಿ ಮದ್ಯ ಸೇವಿಸಲು ಇತರ ರಾಜ್ಯಗಳಿಂದ ಬರುವ ವ್ಯಕಿಗಳು ಮದ್ಯವನ್ನು ಬಾರ್‌ನಲ್ಲಿ ಖರೀದಿ ಮಾಡಿ, ಸೂಕ್ತ ಕಾಂಪೌಂಡ್ ಮತ್ತು ಭದ್ರತಾ ವ್ಯವಸ್ಥೆಗಳಿಲ್ಲದ ಕಾರಣ ಮಾರುಕಟ್ಟೆಗೆ ಸಲೀಸಾಗಿ ಪ್ರವೇಶಿಸಿ, ಮಾರುಕಟ್ಟೆಯ ಕಟ್ಟಡಗಳ ಮೇಲೆ ಕುಳಿತು ಮದ್ಯಪಾನ, ಗಾಂಜಾ ಸೇವನೆ ಮಾಡುವುದು ಸೇರಿದಂತೆ ಮಧ್ಯರಾತ್ರಿ ಸಮಯದಲ್ಲಿ ಇನ್ನೂ ಹಲವು ಅನೈತಿಕ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆ. ಈ ಘಟನೆಗಳಿಗೆ ಮಾರುಕಟ್ಟೆಯ ಕಟ್ಟಡಗಳ ಮೇಲೆ ಕಾಣಸಿಗುವ ಖಾಲಿ ಮತ್ತು ಒಡೆದ ಬಾಟಲಿಗಟಲು ಸ್ಥಳದಲ್ಲಿಯೇ ಬಿಟ್ಟುಹೋದ ಮಾದಕ ವಸ್ತುಗಳ ಖಾಲಿ ಪೊಟ್ಟಣಗಳೇ ಸಾಕ್ಷಿ.ಇಷ್ಟೆಲ್ಲಾ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದರು, ಈ ದಪ್ಪ ಚರ್ಮದ ಅಧಿಕಾರಿಗಳ ಕಣ್ಣಿಗೆ ಕಾಣುತ್ತಿದ್ದರೂ, ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ. ಇವುಗಳ ಬಗ್ಗೆ ಪ್ರಶ್ನಿಸಿದರೆ, ಸೂಕ್ತ ಸಿಬ್ಬಂದಿಯ ಕೊರತೆ, ಶಾಸಕರ ಮತ್ತು ಮೇಲಾಧಿಕಾರಿಗಳ ಮೇಲೆ ದೂರುವುದು ಇಂತಹ ಬಾಜವಾಬ್ದಾರಿ ಉತ್ತರಗಳನ್ನು ನೀಡುತ್ತಾರೆ. ಈ ಸಮಸ್ಯೆಗಳ ಬಗ್ಗೆ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು, ಪೊಲೀಸ್ ಇಲಾಖೆಯವರು ಹಾಗು ಮಾನ್ಯ ಶಾಸಕರು ಗಮನ ಹರಿಸಿ, ರೈತರು ಮತ್ತು ಮಂಡಿ ವ್ಯಾಪಾರಸ್ಥರ ನೆರವಿಗೆ ಧಾವಿಸಿ ಸೂಕ್ತ ಪರಿಹಾರವನ್ನು ಒದಗಿಸಿಕೊಡಬೇಕೆಂದು ತಿಳಿಸಿದರು. ಅದೇ ರೀತಿ ರೈತರು ಬೆಳೆದ ತರಕಾರಿಗಳು ನೆನ್ನೆ ಉತ್ತಮ ಬೆಲೆಗೆ ಮಾರಾಟವಾಗಿದ್ದರೆ, ಈ ಬೆಲೆಗಳ ವ್ಯತ್ಯಾಸ ಕೇವಲ ರೈತರಿಗೆ ಮಾತ್ರ ಅನ್ವಯಿಸುತ್ತಿದ್ದು, ವ್ಯಾಪಾರಿಗಳು ಸಗಟು ದರದಲ್ಲಿ ಗ್ರಾಹಕರಿಗೆ ಹಿಂದಿನ ದಿನದ ದರದಲ್ಲೇ ಮಾರಾಟ ಮಾಡುತ್ತಿದ್ದಾರೆ. ಈ ನಷ್ಟವನ್ನೆಲ್ಲಾ ರೈತರೇ ಬರಿಸಬೇಕು ಎಂದರು. ಈ ಸಂದರ್ಭದಲ್ಲಿ ರೈತರಾದ ಅಶ್ವಥಪ್ಪ, ಅಂಜಿನಪ್ಪ, ಕೃಷ್ಣಪ್ಪ, ನಾಯ್ಡು, ನಂಜಪ್ಪ ಸೇರಿದಂತೆ ಇತರರು ಹಾಜರಿದ್ದರು.